## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ರಾಮಚಂದ್ರ ಹಜೇರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಅರಿಯಡ್ಕ ಗ್ರಾಮ ಪಂಚಾಯಿತಿ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ದುರ್ನಡತೆ ಎಸಗಿರುವ ಕುರಿತು ವರದಿ.

**ಓದಲಾಗಿದೆ:**

/ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ ಪತ್ರ ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಎಂವೈಎಸ್-7391/2014/ಡಿಆರ್‌ಇ-4, ದಿನಾಂಕ: 13.04.2017..

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(1) ಮತ್ತು 12(3)ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 18-03-2017 ರ ವರದಿಯಲ್ಲಿ ಶ್ರೀ ರಾಮಚಂದ್ರ ಹಜೇರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಅರಿಯಡ್ಕ ಗ್ರಾಮ ಪಂಚಾಯಿತಿ, ಪುತ್ತೂರು ತಾಲ್ಲೂಕು, ದಕ್ಷಿಣ-ಕನ್ನಡ ಜಿಲ್ಲೆ ಇವರ ವಿರುದ್ಧ ಶ್ರೀ ಲೋಕೇಶ್ ರೈ ಬಿನ್ ಸಂಜೀವ್ ರೈ, ಅರಿಯಡ್ಕ ಗ್ರಾಮ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರು. ದಿನಾಂಕ 28/10/2014 ರಂದು ನಡೆದ ಸಾಮಾನ್ಯ ಸಭೆಯ ನಡವಳಿಯನ್ನು ಬಿಳಿ ಶಾಯಿಯನ್ನು ಬಳಿಸಿ ತಿದ್ದಿರುತ್ತಾರೆಂದು ಹಾಗೂ ದಿನಾಂಕ 18/11/2014 ರಂದು ನಡೆದ ಸಾಮಾನ್ಯ ಸಭೆಯ ನಿರ್ಣಯ ಪುಸ್ತಕವನ್ನು ಬದಲಾಯಿಸಿ ಪುನ: ಬೇರ ಪುಸ್ತಕದಲ್ಲಿ ಬರೆದಿರುತ್ತಾರೆಂದು ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತೆಗೆದುಕೊಂಡಿರುತ್ತಾರೆ. ಸದರಿಯವರು ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಈ ಕೆಳಕಂಡ ಅಂಶಗಳು ಕಂಡುಬಂದಿವೆ ಎಂದು ತಿಳಿಸಿರುತ್ತಾರೆ.

ದೂರುದಾರರ ದೂರಿಗೆ ಸಂಬಂಧಿಸಿದಂತೆ, ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ರವರು ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ತಾಲ್ಲೂಕು ಪಂಚಾಯತ್, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ರವರ ಮುಖಾಂತರ ಕೂಲಂಕಷವಾಗಿ ತನಿಖೆ ನಡೆಸಿ ವಿವರವಾದ ವರದಿಯನ್ನು ದಿನಾಂಕ: 05/02/2017 ರಂದು ತಮ್ಮ ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ವರದಿಯಲ್ಲಿ, ದೂರುದಾರರು ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ದೂರು ಸಲ್ಲಿಸಿ, ಎದುರುದಾರರುಗಳು ದಿನಾಂಕ:28/10/2014 ರ ಸಾಮಾನ್ಯ ಸಭೆಯಲ್ಲಿ ಬಿಳಿ ಹಾಳೆಯಲ್ಲಿ ನಿರ್ಣಯ ದಾಖಲಿಸಿರುವುದಾಗಿ ಮತ್ತು ನಿರ್ಣಯ ಪುಸ್ತಕದಲ್ಲಿ ವೈಟ್ನರ್ ಹಾಕಿ ತಮಗೆ ಬೇಕಾದ ಹಾಗೆ ತಿದ್ದುಪಡಿ ಮಾಡಿಕೊಂಡಿದ್ದು, ನಿರ್ಣಯ ಸಂಖ್ಯೆ: 10/2014-15, 20/2014-15, 23/2014-15, 32/2014-15, 33/2014-15, 35/2014-15 ಮತ್ತು 54/2014-15, ಒಂದೇ ವರ್ಷದಲ್ಲಿ 7 ನಿರ್ಣಯಗಳನ್ನು ತಿರುಚಿ ತಮಗೆ ಬೇಕಾದ ಹಾಗೆ ಬರೆದಿರುತ್ತಾರೆಂದು ಅಪಾದಿಸಿರುತ್ತಾರೆ. ಈ ಸಂಬಂಧ ಪರಿಶೀಲಿಸಲಾಗಿ,

- ದಿನಾಂಕ:24/06/2014 ರ ಸಾಮಾನ್ಯ ಸಭೆಯ ನಿರ್ಣಯ ಪುಸ್ತಕದಲ್ಲಿ ನಿರ್ಣಯವನ್ನು ತಿದ್ದಿರುವುದು ಕಂಡುಬಂದಿರುತ್ತದೆ ಹಾಗೂ ಪಂಚಾಯತ್ ರಾಜ್ ನಿರ್ಣಯ ಪುಸ್ತಕದಲ್ಲಿ ನಿರ್ಣಯವನ್ನು ತಿದ್ದಿರುವುದು ಕಂಡುಬಂದಿರುತ್ತದೆ.
- ಪಂಚಾಯತ್ ರಾಜ್ ಅಧಿನಿಯಮ 1993ರ ಕಲಂ ಸಂಖ್ಯೆ: 55 ರಂತೆ ನಿರ್ಣಯ ಪುಸ್ತಕದಲ್ಲಿ ಅಧ್ಯಕ್ಷಕರು ಸಹಿ ಮಾಡಿರುವುದಿಲ್ಲ.
- 2ನೇ ಎದುರುದಾರರು ನಿಯಮಾವಳಿಯಂತೆ ನಿರ್ಣಯ ಪುಸ್ತಕದಲ್ಲಿ ದಾಖಲಿಸಿರುವುದು ಕಂಡುಬಂದಿರುವುದಿಲ್ಲ.
- ನಿರ್ಣಯ ನಂ.20/2014-15ರ ನಿರ್ಣಯವನ್ನು ತಿದ್ದಿರುವುದು ಕಂಡುಬರುತ್ತದೆ.

* ದಿನಾಂಕ: 30/07/2014ರ ಸಾಮಾನ್ಯ ಸಭೆ ನಿರ್ಣಯ ಸಂಖ್ಯೆ: 32/2014-15, 33/2014-15, 35/2014-15 ಮತ್ತು ದಿ:26/08/2014 ರ ಸಾಮಾನ್ಯ ಸಭೆ ನಿರ್ಣಯ ಸಂಖ್ಯೆ: 54/2014-15 ನಿರ್ಣಯವನ್ನು ವೈಟ್ನರ್ ಹಾಕಿ ತಿದ್ದುಪಡಿ ಮಾಡಿರುವುದು ಕಂಡುಬರುತ್ತದೆ.
* ಮೇಲಿನ ಎಲ್ಲಾ ತಿದ್ದುಪಡಿಯ ಸಂದರ್ಭದಲ್ಲಿ ಈ ಕೆಳಕಂಡವರು ಕರ್ತವ್ಯ ನಿರ್ವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ.

(1) ಶ್ರೀಮತಿ ಶಶಿಕಲಾ ಚೌಟ, ಅಧ್ಯಕ್ಷರು, ಅರಿಯಡ್ಕ ಗ್ರಾಮ ಪಂಚಾಯತ್, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.

(2) ಶ್ರೀ ಬಾಬು ರಾಮಚಂದ್ರ ಹಜೇರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಅರಿಯಡ್ಕ ಗ್ರಾಮ ಪಂಚಾಯತ್, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಎಂದು ಮಾನ್ಯ ಉಪಲೋಕಾಯುಕ್ತರು ತಮ್ಮ ವರದಿಯಲ್ಲಿ ತಿಳಿಸಿರುತ್ತಾರೆ

ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಪುತ್ತೂರು ರವರು ಸಲ್ಲಿಸಿರುವ ವರದಿಯನ್ನು ಎದುರುದಾರರಿಗೆ ಕಳುಹಿಸಿ, ಈ ಬಗ್ಗೆ ಆಕ್ಷೇಪಣೆಯನ್ನು ಸಲ್ಲಿಸುವಂತೆ ತಿಳಿಸಲಾಗಿದ್ದರೂ ಸಹಾ, ಇದುವರೆವಿಗೂ ಯಾವುದೇ ಪೂರಕ ದಾಖಲಾತಿಗಳನ್ನು ನಿಗಧಿತ ದಿನಾಂಕದೊಳಗಾಗಿ ಆಕ್ಷೇಪಣೆಯನ್ನು ಸಲ್ಲಿಸಿರುವುದಿಲ್ಲ. ಆದ್ದರಿಂದ, ಸದರಿ ಪ್ರಕರಣದಲ್ಲಿ ಎದುರುದಾರರ ಆಕ್ಷೇಪಣೆ ಇಲ್ಲವೆಂದು ಪರಿಗಣಿಸಲಾಗಿದೆ.

ಈ ಪ್ರಕರಣದ ದೂರಿನಲ್ಲಿರುವ ಆಪಾದನೆ ಹಾಗೂ ಎಲ್ಲಾ ದಾಖಲೆಗಳನ್ನು ಪರಿಶೀಲಸಿದ್ದು, ಎದುರುದಾರರು ಕರ್ತವ್ಯ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ. ನಿರ್ಣಯಗಳನ್ನು ವೈಟ್ನರ್ ಹಾಕಿ ತಿದ್ದುಪಡಿ ಮಾಡುವ ಮೂಲಕ ಎದುರುದಾರರು ಕರ್ತವ್ಯ ಲೋಪವೆಸಗಿರುವುದು ಕಂಡುಬಂದಿರುತ್ತದೆ, ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ನಿಷ್ಠೆ ಇಲ್ಲದೆ. ಬೇಜವಾಬ್ದಾರಿಯಿಂದ ವರ್ತಿಸಿ ಸರ್ಕಾರಿ/ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿದ್ದಾರೆಂಬುದು ಮೇಲ್ನೋಟಕ್ಕೆ ಕಂಡು ಬರುತ್ತದೆ ಎಂದು ಮಾನ್ಯ ಉಪಲೋಕಾಯುಕ್ತರು ತಮ್ಮ ವರದಿಯಲ್ಲಿ ತಿಳಿಸಿರುತ್ತಾರೆ.

ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಶ್ರೀ ರಾಮಚಂದ್ರ ಹಜೇರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಅರಿಯಡ್ಕ ಗ್ರಾಮ ಪಂಚಾಯತ್, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರು ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ ಕರ್ತವ್ಯ ಲೋಪವೆಸಗಿ, ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ನಿಯಮ 3(1)(ii) ಮತ್ತು (iii) ರನ್ವಯ ದುರ್ನಡತೆಯೆಸಗಿದ್ದು, ಶಿಸ್ತು ಕ್ರಮಕ್ಕೆ ಭಾಧ್ಯರಾಗಿರುವುದು ಕಂಡು ಬಂದಿರುವುದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ಎದುರುದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11-ಎ ರಡಿಯಲ್ಲಿ ಸದರಿಯವರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/326/ಗ್ರಾಪಂಕಾ/2017 ಬೆಂಗಳೂರು, ದಿನಾಂಕ:02-06-2017</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ರಾಮಚಂದ್ರ ಹಜೇರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಅರಿಯಡ್ಕ ಗ್ರಾಮ ಪಂಚಾಯತ್, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು,ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.(ಇದರೊಂದಿಗೆ ಈ ಪ್ರಕರಣದ ಮೂಲ ದಾಖಲಾತಿಯನ್ನು ಪುಟ ಸಂಖ್ಯೆ 01 ರಿಂದ 33 ರವರೆಗೆ ಲಗತ್ತಿಸಲಾಗಿದೆ.)
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
6. ಶ್ರೀ ರಾಮಚಂದ್ರ ಹಜೇರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಅರಿಯಡ್ಕ ಗ್ರಾಮ ಪಂಚಾಯತ್, ಪುತ್ತೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ
7. ಗಣಕ ಕೋಶ
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.